158ನೇ ಮು ಉ ಶೂ.ವೇ:- [illegible] ದಿ:-16-03-2026

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಡಿ.ಎಸ್. ಅರುಣ್ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ**

**ವಿಷಯ:**

ಶಿವಮೊಗ್ಗದ ಕುವೆಂಪು ವಿಶ್ವವಿದ್ಯಾಲಯದ ಘನತೆಗೆ ಚ್ಯುತಿ ತರುತ್ತಿರುವ ಅತ್ಯಂತ ಗಂಭೀರವಾದ ವಿಷಯದ ಬಗ್ಗೆ ದಿನಾಂಕ:28.2.2026ರ ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ ವಿ.ವಿ.ಆರೋಪಿತ ಕುಲಸಚಿವರಿಗೆ ಸರಕಾರದ ರಕ್ಷೆ? ಶಿರೋನಾಮೆಯಡಿ ವರದಿ ಪ್ರಕಟವಾಗಿರುತ್ತದೆ.

ಶಿವಮೊಗ್ಗ ವಿಶ್ವವಿದ್ಯಾಲಯದ ಹಾಲಿ ಕುಲಸಚಿವರ ವಿರುದ್ಧ ಭ್ರಷ್ಟಾಚಾರ ಹಾಗೂ ಇನ್ನಿತರ ಕರ್ತವ್ಯ ಲೋಪದಂತಹ ಗಂಭೀರ ಆರೋಪಗಳು ಕೇಳಿ ಬಂದಿವೆ. ಅಲ್ಲದೆ, ಕುಲಸಚಿವರು ಮತ್ತು ಕುಲಪತಿಗಳ ನಡುವೆ ಹೊಂದಾಣಿಕೆ ಇಲ್ಲವಾಗಿದ್ದು, ಇದರಿಂದ ವಿಶ್ವವಿದ್ಯಾಲಯದ ಘನತೆಗೆ ಕೀರ್ತಿಗೆ ಧಕ್ಕೆ ಸಂಭವಿಸಬಹುದಾದ ವಾತಾವರಣ ನಿರ್ಮಾಣವಾಗುತ್ತಿದೆ.

ಸರ್ಕಾರ ಇಂತಹ ಯಾವುದೇ ಗೊಂದಲಗಳಿಗೆ ಅವಕಾಶ ನೀಡದೆ, ವಿಶ್ವವಿದ್ಯಾಲಯದ ಘನತೆಯನ್ನು ಉಳಿಸಲು ಕೂಡಲೇ ಮಧ್ಯಪ್ರವೇಶಿಸಬೇಕು. ಶೈಕ್ಷಣಿಕ ಮತ್ತು ಆಡಳಿತಾತ್ಮಕ ದೃಷ್ಟಿಯಿಂದ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು. ವಿಶ್ವವಿದ್ಯಾಲಯದ ಘನತೆಯನ್ನು ಎತ್ತಿಹಿಡಿಯುವ ನಿಟ್ಟಿನಲ್ಲಿ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಶೂನ್ಯ ವೇಳೆಯಲ್ಲಿ ಮಾನ್ಯ ಉನ್ನತ ಶಿಕ್ಷಣ ಸಚಿವರನ್ನು ಒತ್ತಾಯಿಸುತ್ತೇನೆ.

**ಸರ್ಕಾರದ ಹೇಳಿಕೆ:**

ಸರ್ಕಾರದಿಂದ ದಿನಗೂಲಿ ಹಾಗೂ ಹಂಗಾಮಿ ನೇಮಕಾತಿಗಳಿಗೆ ನಿರ್ಬಂಧವಿದ್ದರೂ ಕೂಡ ಸರ್ಕಾರದ ನಿರ್ದೇಶನವನ್ನು ಧಿಕ್ಕರಿಸಿ ಇತ್ತೀಚಿಗೆ ಸಿಬ್ಬಂದಿಗಳನ್ನು ಏಜೆನ್ಸಿ ಮೂಲಕ ನೇಮಕ ಮಾಡಿಕೊಂಡಿರುವುದಾಗಿ ಹಾಗೂ ಸಾಗರ ಗಂಗೋತ್ರಿ ಬಿ.ಇಡಿ ಕಾಲೇಜಿನ ವಿದ್ಯಾರ್ಥಿಗಳಿಗೆ ಕಾನೂನು ಬಾಹಿರವಾಗಿ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಿರುವುದಾಗಿ ಮತ್ತು ಭೋಜ್ಯನಾಯಕ್ ಇವರಿಗೆ ವಿಶ್ವವಿದ್ಯಾಲಯದಿಂದ ಕರ್ನಾಟಕ ಲೋಕಸೇವಾ ಆಯೋಗದ ಸದಸ್ಯರ ನೇಮಕಾತಿಗೆ ಸಂಬಂಧಿಸಿದಂತೆ NOC ನೀಡಿರುವ ಕುರಿತು ಕುವೆಂಪು ವಿಶ್ವವಿದ್ಯಾಲಯದ ಕುಲಸಚಿವ (ಆಡಳಿತ) ರಾದ ಶ್ರೀ ಎ.ಎಲ್. ಮಂಜುನಾಥ, ಕೆ.ಎ.ಎಸ್ (ಸೂಪರ್ ಟೈಂ ಸ್ಕೇಲ್) ಇವರ ವಿರುದ್ಧ ಹಲವಾರು ದೂರುಗಳು ಸರ್ಕಾರದಲ್ಲಿ ಸ್ವೀಕೃತವಾಗಿದ್ದ ಹಿನ್ನೆಲೆಯಲ್ಲಿ ಹಾಗೂ ದಿನಪತ್ರಿಕೆಗಳಲ್ಲೂ ಸಹ ಸುದ್ದಿ ಪ್ರಕಟವಾದ ಹಿನ್ನೆಲೆಯಲ್ಲಿ, ಈ ಎಲ್ಲಾ ದೂರುಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸತ್ಯಾಸತ್ಯತೆಯ ವರದಿಯನ್ನು ನೀಡುವಂತೆ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತನ್ನು ಕೋರಲಾಗಿದೆ.

ಶ್ರೀ ಎ.ಎಲ್. ಮಂಜುನಾಥ, ಕೆ.ಎ.ಎಸ್ ಕುಲಸಚಿವರು (ಆಡಳಿತ), ಕುವೆಂಪು ವಿಶ್ವವಿದ್ಯಾಲಯ ಇವರ ವಿರುದ್ಧ ಸ್ವೀಕೃತವಾದ ದೂರುಗಳಿಗೆ ಸಂಬಂಧಿಸಿದಂತೆ, ಸರ್ಕಾರಕ್ಕೆ ವರದಿ ಸಲ್ಲಿಸಲು ಕುಲಪತಿಗಳನ್ನು ಕೋರಲಾಗಿರುತ್ತದೆ.

ಕುಲಪತಿಯವರು ದಿನಾಂಕ:30.01.2026ರಂದು ಸರ್ಕಾರಕ್ಕೆ ಸಲ್ಲಿಸಿರುವ ಪತ್ರದಲ್ಲಿ ಶ್ರೀ .ಎ.ಎಲ್. ಮಂಜುನಾಥ ಇವರು ದೈನಂದಿನ ಆಡಳಿತದಲ್ಲಿ ಸ್ವೇಚ್ಛಾಚಾರ ಹಾಗೂ ಅವಿಧೇಯತೆಯನ್ನು ತೋರುತ್ತಿದ್ದು, ವಿಶ್ವವಿದ್ಯಾಲಯದ ಹಿತದೃಷ್ಟಿಯಿಂದ ಸೂಕ್ತ ಕ್ರಮ ಕೈಗೊಳ್ಳಲು ಮಾಡಿದ ಯಾವುದೇ ಆದೇಶಗಳನ್ನು ಪಾಲಿಸಲು ವಿಫಲರಾಗಿರುತ್ತಾರೆ. ಇವರ ವಿರುದ್ಧ ವಿಶ್ವವಿದ್ಯಾಲಯದ ಸಿಬ್ಬಂದಿಗಳಿಂದ ವಿವಿಧ ರೀತಿಯ ಕಿರುಕುಳ, ಭ್ರಷ್ಟಾಚಾರ ಮತ್ತು ಮಹಿಳಾ ಉದ್ಯೋಗಿಯೊಬ್ಬರಿಗೆ ಲೈಂಗಿಕ ಕಿರುಕುಳ ನೀಡಿರುವುದಾಗಿ ಗುರುತರ ದೂರುಗಳು ಸಹ ಕೇಳಿಬಂದಿರುವುದರಿಂದ, ವಿಶ್ವವಿದ್ಯಾಲಯದ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಹಿತದೃಷ್ಟಿಯಿಂದ ಸದರಿಯವರನ್ನು ವಿಶ್ವವಿದ್ಯಾಲಯದಿಂದ ಕೂಡಲೇ ವರ್ಗಾವಣೆ ಮಾಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಕುಲಪತಿಗಳ ಸದರಿ ಕೋರಿಕೆಯ ಮೇರೆಗೆ ಮತ್ತು ವಿಶ್ವವಿದ್ಯಾಲಯದ ಆಡಳಿತಾತ್ಮಕ ಮತ್ತು ಶೈಕ್ಷಣಿಕ ಹಿತದೃಷ್ಟಿಯಿಂದ ಶ್ರೀ.ಎ.ಎಲ್. ಮಂಜುನಾಥ, ಕೆ.ಎ.ಎಸ್, ಕುಲಸಚಿವರು (ಆಡಳಿತ), ಕುವೆಂಪು ವಿಶ್ವವಿದ್ಯಾಲಯ ಇವರನ್ನು ವರ್ಗಾವಣೆ ಮಾಡುವ ಸಂಬಂಧಪಟ್ಟ ಕಡತವನ್ನು ಇವರ ಮಾತೃ ಇಲಾಖೆಯಾದ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗೆ ಕಳುಹಿಸಲಾಗಿದೆ.

ಸಂಖ್ಯೆ: ಇಡಿ 26 ಯುಎಸ್‌ವಿ 2026

**(ಡಾ. ಎಂ.ಸಿ. ಸುಧಾಕರ್)**

ಉನ್ನತ ಶಿಕ್ಷಣ ಸಚಿವರು